# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 232 |
| ಉತ್ತರಿಸಬೇಕಾದ ದಿನಾಂಕ | : | 15.02.2023 |
| ಸದಸ್ಯರ ಹೆಸರು | : | ಶ್ರೀ. ಮುನಿರಾಜುಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : | ಮಾನ್ಯ ಕಂದಾಯ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಕಂದಾಯ ಇಲಾಖೆಯ ಅಭಿಲೇಖಾಲಯದಲ್ಲಿರುವ ದಾಖಲೆಗಳನ್ನು ಪಡೆಯಲು ಸಾರ್ವಜನಿಕರಿಗೆ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. |
| ಆ | ಬಂದಿದ್ದಲ್ಲಿ, ಸದರಿ ವಿಳಂಬ ತಪ್ಪಿಸಲು ಸರ್ಕಾರ ಕೈಗೊಂಡ ಕ್ರಮವೇನು; | ಅನ್ವಯಿಸುವುದಿಲ್ಲ |
| ಇ | ಅಭಿಲೇಖಾಲಯದಲ್ಲಿ ಶಿಥಿಲಾವಸ್ಥೆಯಲ್ಲಿರುವ ದಾಖಲೆಗಳನ್ನು ಸ್ಕ್ಯಾನ್ ಮಾಡಿ ಸಂರಕ್ಷಿಸುವ ಹಾಗೂ ಸಾರ್ವಜನಿಕರಿಗೆ ಭೂ ದಾಖಲೆಗಳ ಇಲಾಖೆಯ ರೀತಿಯಲ್ಲಿ ವಿತರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಮಾಡಲಾಗುವುದು; | ಎಂ.ಎಲ್.ಆರ್ (Modernisation of Land Records) ಯೋಜನೆಯಡಿ ಕಂದಾಯ ಇಲಾಖೆಯ ಅಭಿಲೇಖಾಲಯಗಳಲ್ಲಿರುವ ಭೌತಿಕ ಕಡತಗಳನ್ನು ಸ್ಕ್ಯಾನ್ ಮಾಡಿ ಡಿಜಿಟಲ್ ರೂಪದಲ್ಲಿ ಸಂಗ್ರಹಿಸಿ ತ್ವರಿತವಾಗಿ ಸಾರ್ವಜನಿಕರಿಗೆ ವಿತರಿಸುವ ಉದ್ದೇಶದಿಂದ ಪ್ರತಿ ತಾಲ್ಲೂಕು ಕಛೇರಿ, ಉಪವಿಭಾಗಾಧಿಕಾರಿಗಳ ಕಛೇರಿ ಮತ್ತು ಜಿಲ್ಲಾಧಿಕಾರಿಗಳ ಕಛೇರಿಗಳಿಗೆ ತಲಾ ಒಂದು ಸ್ಕ್ಯಾನರ್, ಪ್ರಿಂಟರ್ ಹಾಗೂ 2 ಡೆಸ್ಕ್ ಟಾಪ್ ಒದಗಿಸಲಾಗಿರುತ್ತದೆ. |
| ಈ | ಅಭಿಲೇಖಾಲಯದಲ್ಲಿ ಶಿಥಿಲಾವಸ್ಥೆಯಲ್ಲಿರುವ ದಾಖಲೆಗಳನ್ನು ಸಂರಕ್ಷಿಸಲು ಸರ್ಕಾರ ಕೈಗೊಂಡ ಕ್ರಮವೇನು | ಅಭಿಲೇಖಾಲಯದಲ್ಲಿರುವ ಕಡತ ಮತ್ತು ವಹಿಗಳ ಇಂಡೆಕ್ಸಿಂಗ್ ಮತ್ತು ಕ್ಯಾಟಲಾಗಿಂಗ್ ಕಾರ್ಯಕ್ಕಾಗಿ ಭೂಮಿ ಉಸ್ತುವಾರಿ ಕೋಶದಿಂದ "ಅಭಿಲೇಖಾಲಯ ತಂತ್ರಾಂಶವನ್ನು" ಅಭಿವೃದ್ಧಿಪಡಿಸಿದ್ದು, ಸದರಿ ತಂತ್ರಾಂಶವನ್ನು ರಾಜ್ಯದ ಎಲ್ಲಾ ಕಂದಾಯ ಕಛೇರಿಗಳಲ್ಲಿ ಅಳವಡಿಸಲಾಗಿರುತ್ತದೆ. ಮುಂದುವರೆದು, ಕಡತಗಳ ಸ್ಕ್ಯಾನಿಂಗ್ ಕಾರ್ಯಕ್ಕಾಗಿ ತಂತ್ರಾಂಶ ಅಭಿವೃದ್ಧಿಪಡಿಸಲಾಗುತ್ತಿದೆ. |

ಕಂ ಇ 54 ಎಂ ಆರ್ ಆರ್ 2023

(ಆರ್. ಅಶೋಕ)
ಕಂದಾಯ ಸಚಿವರು